# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 19, ಸಂಜಯನಗರ. ಬೆಂಗಳೂರು.

ಸಂಖ್ಯೆ: ಸ.ಅ/ವಾ-19/ಪಿ.ಆರ್/07/2020-21 ದಿನಾಂಕ:~~21-12-2020~~ 19-12-2020

## ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/ 2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ: 19-12-2020 ರಂದು ವಾರ್ಡ್ ನಂ:19 ಸಂಜಯನಗರ ಸೆಂಟ್ರಲ್ ಎಕ್ಸೈಜ್ ಲೇಔಟ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

::ಸಭೆಗೆ ಹಾಜರಾಗಿದ್ದವರ ವಿವರಗಳು::

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಷರಾ |
|---|---|---|---|
| 1. | ಡಾ. ಕೆ.ಹರೀಶ್‌ನಾಯ್ಕ್. ಕ.ಆ.ಸೇ ಸಹಾಯಕ ಆಯುಕ್ತರು (ಆಡಳಿತ) | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು | |
| 2. | ಶ್ರೀ.ರುದ್ರಮುನಿ.ಆರ್.ಟಿ | ಸದಸ್ಯ ಕಾರ್ಯದರ್ಶಿ ವಾಡ್ ನಂ: 19 | |
| 3. | ಶ್ರೀ.ಅಕ್ಷಯ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾಡ್ ನಂ: 19 | |
| 4. | ಶ್ರೀ.ಪ್ರವೀಣ್.ಟಿ | ಕಂದಾಯ ವಸೂಲಿದಾರರು, ವಾರ್ಡ್.19 | |
| 5. | ಶ್ರೀ.ರಾಜೇಶ್.ಎನ್ | ಕಂದಾಯ ವಸೂಲಿದಾರರು, ವಾರ್ಡ್.19 | |
| 6. | ಶ್ರೀಮತಿ ಸೌಮ್ಯ | ಬಿ.ಡಬ್ಲ್ಯೂ ಎಸ್.ಎಸ್.ಬಿ | |
| 7. | ಶ್ರೀ.ಸತ್ಯನಾರಾಯಣ | ಟ್ರಾಫಿಕ್ ಪೋಲಿಸ್ ವಿಭಾಗ | |
| 8. | ಶ್ರೀ.ಸ್ವಾಮಿ | ಬಿ.ಬಿ.ಎಂ.ಪಿ ಸ್ಟ್ರೀಟ್ ಲೈಟ್ ವಿಭಾಗದ ಪರವಾಗಿ | |

ವಾರ್ಡ್ ಕಾರ್ಯದರ್ಶಿಗಳಾದ ಶ್ರೀ ರುದ್ರಮುನಿರವರು ಸಭೆಗೆ ಹಾಜರಾದ ಅಧ್ಯಕ್ಷರು, ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಕೆ.ಹರೀಶ್‌ನಾಯ್ಕ್, ಕ.ಆ.ಸೇ ರವರಿಗೆ ಮತ್ತು ಸಭೆಯಲ್ಲಿ ಸೇರಿದ ಕಮಿಟಿ ಸದಸ್ಯರುಗಳಿಗೆ ಹಾಗೂ ಅಧಿಕಾರಿ ವರ್ಗದವರಿಗೆ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯಲ್ಲಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು

- ಈ ಹಿಂದಿನ ಸಭೆಯಲ್ಲಿ ತಿಳಿಸಿದಂತೆ ಸಂಜಯನಗರ ಮುಖ್ಯರಸ್ತೆಯಲ್ಲಿರುವ ಗ್ಯಾರೇಜು ಮುಂಭಾಗದ ವಾಹನಗಳಿಂದ ಸಂಚಾರಕ್ಕೆ ತೊಂದರೆಯಾಗುತ್ತಿರುವ ಮತ್ತು ಅದರ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ ಕೋರಿದರು
- ಹೆಬ್ಬಾಳ ಮೇಲ್ಸೇತುವೆ ಹಾಗೂ ಭೂಪಸಂದ್ರ ನಡುವೆ ಜನಸಂದಣಿ ಹಾಗೂ ವಾಹನಗಳ ಓಡಾಟದಿಂದ ಸಾರ್ವಜನಿಕರಿಗೆ ರಸ್ತೆಯನ್ನು ದಾಟಲು ಸಿಗ್ನಲ್ ಲೈಟ್ ಹಾಕಲು ಕೈಗೊಂಡ ಕ್ರಮದ ಕೋರಿದರು.
- ಸೆಂಟ್ರಲ್ ಎಕ್ಸೈಜ್ ಲೇಔಟ್‌ನ ಉದ್ಯಾನವನವನ್ನು ದುರಸ್ಥಿಪಡಿಸಲು ಮತ್ತು ಅದಕ್ಕೆ ಸಂಬಂಧಪಟ್ಟಂತೆ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿದರು.
- ಸಂಜಯನಗರ ವಾರ್ಡ್‌ನ ಮತದಾರರ ಪಟ್ಟಿಯನ್ನು ಸರಿಪಡಿಸಿ ಹೊಸದಾಗಿ ಸೇರ್ಪಡಿತ ಪಟ್ಟಿಯನ್ನು ಸೇರಿಸಲು ಹಾಗೂ ಇಲ್ಲದಿರುವ ಮತದಾರರ ಹೆಸರನ್ನು ಪಟ್ಟಿಯಿಂದ ತೆಗೆದು ಹಾಕಲು ಕ್ರಮ ಕೈಗೊಳ್ಳುವಂತೆ ಕೋರಿದರು.

• ಸಂಜಯನಗರ ಮುಖ್ಯರಸ್ತೆ ಶಿಕ್ಷಾ ಸಾಗರ ಶಾಲೆಯ ಹತ್ತಿರ ಶಾಲಾ ಮಕ್ಕಳನ್ನು ಶಾಲೆಗೆ ಬಿಡುವ ಸಂದರ್ಭದಲ್ಲಿ ಟ್ರಾಫಿಕ್ ಜಾಮ್ ಉಂಟಾಗುತ್ತಿದ್ದು, ಇದರ ಬಗ್ಗೆ ಕ್ರಮ ವಹಿಸುವಂತೆ ಕೋರಿದರು.

ವಾರ್ಡ್ ಅಧ್ಯಕ್ಷರು ಮಾತನಾಡುತ್ತಾ ಈ ಮೇಲಿನ ಎಲ್ಲಾ ಅಂಶಗಳನ್ನು ಆದ್ಯತೆಯ ಮೇರೆಗೆ ಬಗೆಹರಿಸುವಂತೆ ವಾರ್ಡ್ ಕಾರ್ಯದರ್ಶಿಗಳಿಗೆ ತಿಳಿಸುತ್ತಾ ಮತ್ತು ಸಭೆಯಲ್ಲಿ ಹಾಜರಿದ್ದ ಎಲ್ಲಾ ಕಮಿಟಿ ಸದಸ್ಯರಿಗೆ ಮತ್ತು ಅಧಿಕಾರಿ ವರ್ಗದವರಿಗೆ ವಂದನೆಗಳನ್ನು ತಿಳಿಸುತ್ತಾ ಈ ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರು
ವಾರ್ಡ್ ನಂ. 19, ಸಂಜಯನಗರ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ.19, ಸಂಜಯನಗರ

1. ಮಾನ್ಯ ಜಂಟಿ ಆಯುಕ್ತರು (ಪೂರ್ವ) ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
3. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.
4. ಕಛೇರಿ ಪ್ರತಿ.